ಕರ್ನಾಟಕ ಸರ್ಕಾರ

ದಿನಾಂಕ: 2–10–2017

# ಗರ್ಭಿಣಿ ಸ್ತ್ರೀಯರು ಪೌಷ್ಠಿಕಾಂಶ ಹೊಂದಿ ಆರೋಗ್ಯವಂತರಾಗಿದ್ದರೆ ಮಕ್ಕಳು ಆರೋಗ್ಯವಂತರಾಗಿರುತ್ತಾರೆ



–ಮುಖ್ಯಮಂತ್ರಿ ಸಿದ್ದರಾಮಯ್ಯ

ಬೆಂಗಳೂರು ಅ. 2: ಗರ್ಭಿಣಿಯರು ಪೌಷ್ಠಿಕಾಂಶ ಹೊಂದಿ ಆರೋಗ್ಯವಂತರಾಗಿದ್ದರೆ ಮಕ್ಕಳು ಆರೋಗ್ಯವಂತರಾಗಿರುತ್ತಾರೆ ಎಂದು ಮಾನ್ಯ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ತಿಳಿಸಿದರು.

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಇಂದು ವಿಧಾನ ಸೌಧದ ಬ್ಯಾಂಕ್ವೆಟ್ ಹಾಲ್‌ನಲ್ಲಿ ಏರ್ಪಡಿಸಿದ್ದ ಮಾತೃಪೂರ್ಣ ಯೋಜನೆ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಮುಖ್ಯಮಂತ್ರಿ ಅವರು ರಾಜ್ಯದಲ್ಲಿ ಸುಮಾರು 10 ಲಕ್ಷಕ್ಕೂ ಹೆಚ್ಚು ಗರ್ಭಿಣಿಯರು ಹಾಗೂ ಬಾಣಂತಿಯರಿದ್ದಾರೆ ಅವರಲ್ಲಿ ಬಹಳಷ್ಟು ಜನರಿಗೆ ಪೌಷ್ಠಿಕಾಂಶವುಳ್ಳ ಆಹಾರಗಳು ಸಿಗುತ್ತಿಲ್ಲ. ಆ ಕಾರಣದಿಂದಲೇ ಸರ್ಕಾರ ಮಹತ್ವಾಕಾಂಕ್ಷೆ ಯೋಜನೆಯಾದ ಮಾತೃಪೂರ್ಣ ಯೋಜನೆಯನ್ನು ಜಾರಿಗೆ ತಂದಿದೆ ಎಂದರು.

ತಾಯಂದಿರ ಎದೆ ಹಾಲು ಪೌಷ್ಠಿಕಾಂಶದಿಂದ ಕೂಡಿರಬೇಕಾದರೆ ಅವರಿಗೆ ಪೌಷ್ಠಿಕಾಂಶವುಳ್ಳ ಆಹಾರ ದೊರಕಬೇಕು ಎಂದು ಮಾತನಾಡಿದ ಮುಖ್ಯಮಂತ್ರಿ ಅವರು ಮಧ್ಯಾಹ್ನದ ಬಿಸಿಯೂಟ ಯೋಜನೆಯನ್ನು ಗರ್ಭಿಣಿಯರಿಗೆ ಅನ್ನ, ಸಾಂಬಾರ್, ಮೊಟ್ಟೆ, ಕಾಳು, ಸೊಪ್ಪಿನ ಪಲ್ಯ, ಹಾಲು ಹಾಗೂ ಚಿಕ್ಕಿಯಂತ ಪೌಷ್ಟಿಕಾಂಶವುಳ್ಳ ಆಹಾರವನ್ನು ಅಂಗನವಾಡಿ ಕೇಂದ್ರಗಳಲ್ಲಿ ನೀಡಲಾಗುವುದು ಎಂದು ತಿಳಿಸಿದರು.

ಆಂಧ್ರ ಪ್ರದೇಶ ಹಾಗೂ ತೆಲಂಗಾಣ ರಾಜ್ಯಗಳನ್ನು ಹೊರತುಪಡಿಸಿದಲ್ಲಿ ನಮ್ಮ ರಾಜ್ಯ ಸರ್ಕಾರವೇ ಯೋಜನೆಯನ್ನು ಜಾರಿಗೆ ತರುತ್ತಿರುವುದು ಹೆಮ್ಮೆಯ ವಿಷಯವಾಗಿದೆ ಎಂದು ಮಾತನಾಡಿದ ಮುಖ್ಯ ಮಂತ್ರಿ ಸಿದ್ದರಾಮಯ್ಯ ಅವರು ಸಮಾಜದಲ್ಲಿ ಯಾರು ಕೂಡ ಆಹಾರ ಸಮಸ್ಯೆ ಹಾಗೂ ಪೌಷ್ಠಿಕಾಂಶದ ಕೊರತೆಯಿಂದ ಬಳಲಬಾರದು ಎಂಬುದು ಸರ್ಕಾರದ ಉದ್ದೇಶವಾಗಿದೆ. ರಾಜ್ಯದಲ್ಲಿ ಸುಮಾರು ನಾಲ್ಕು ಕೋಟಿ ಜನರಿಗೆ ಒಂದು ಕುಟುಂಬಕ್ಕೆ ಏಳು ಕೆ.ಜಿ. ಅಕ್ಕಿಯನ್ನು ಸರ್ಕಾರ ಉಚಿತವಾಗಿ ನೀಡುತ್ತಿದೆ. ಇದರಿಂದಾಗಿ ರಾಜ್ಯದಲ್ಲಿ ಭೀಕರ ಬರಗಾಲ ಎದುರಾದರೂ ರಾಜ್ಯದ ಜನರು ಗುಳೆಹೋಗಿಲ್ಲ ಎಂದು ಮಾತನಾಡಿದರು.

ಶಾಲೆಗಳಿಗೆ ಹಾಗೂ ಅಂಗನವಾಡಿ ಕೇಂದ್ರಗಳಿಗೆ ಹೋಗುವ ಪ್ರತಿ ಮಕ್ಕಳಿಗೂ ವಾರದಲ್ಲಿ ಎರಡು ದಿನ 150 ಮಿಲಿಗ್ರಾಂ ಕೆನೆಭರಿತ ಹಾಲು ಹಾಗೂ ಮೊಟ್ಟೆಯನ್ನು ನೀಡಲಾಗುವುದು ಎಂದು ಮಾತನಾಡಿದ ಮುಖ್ಯಮಂತ್ರಿ ಅವರು ಗರ್ಭಿಣಿಯರು ಹಾಗೂ ಬಾಣಂತಿಯರಲ್ಲಿ ಪೌಷ್ಠಿಕಾಂಶ ಹೆಚ್ಚಿಸುವಂತ ಈ ಮಹತ್ವದ ಯೋಜನೆ ಯಶಸ್ವಿಗೊಳಿಸುವಲ್ಲಿ ಅಂಗನವಾಡಿ ಸಹಾಯಕಿಯರು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಅಧಿಕಾರಿಗಳು ಸರ್ಕಾರದ ಜೊತೆಗೆ ಕೈಜೋಡಿಸಿ ಕೆಲಸ ನಿರ್ವಹಿಸಬೇಕು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ತಿಳಿಸಿ ಗರ್ಭಿಣಿ ಸ್ತ್ರೀಯರಿಗೆ ಮುಖ್ಯಮಂತ್ರಿಗಳು ಊಟ ಬಡಿಸಿ ಶುಭ ಹಾರೈಸಿದರು.

ಮಹಿಳೆಯರು ಸಾಮಾಜಿಕವಾಗಿ, ಶೈಕ್ಷಣಿಕವಾಗಿ ಹಾಗೂ ಆರ್ಥಿಕವಾಗಿ ಸಧೃಡರಾಗಬೇಕು ಎಂದು ಮಾತನಾಡಿದ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವರಾದ ಶ್ರೀಮತಿ ಉಮಾಶ್ರೀ ಅವರು ಐ.ಸಿ.ಡಿ.ಎಸ್. ಯೋಜನೆಗೆ ಕೇಂದ್ರ ಸರ್ಕಾರ ಈ ಮೊದಲು ನೀಡುತ್ತಿದ್ದ ಶೇ. 90 ರಷ್ಟು ಅನುದಾನವನ್ನು ಕಡಿಮೆ ಮಾಡಿದೆ. ಆದರೂ ನಮ್ಮ ಸರ್ಕಾರ ಶೇ. 80 ರಷ್ಟು ಹಣವನ್ನು ತಾನೆ ಭರಿಸಿ ಕಾರ್ಯಕ್ರಮ ಅನುಷ್ಠಾನ ಮಾಡುತ್ತಿದೆ. ಈ ಕಾರ್ಯಕ್ರಮಕ್ಕೆ ಸರ್ಕಾರ 302 ಕೋಟಿ ರೂ. ಗಳನ್ನು ವೆಚ್ಚ ಮಾಡುತ್ತಿದೆ ಎಂದರು. ಈ ಮೊದಲು ಗರ್ಭಿಣಿ ಬಾಣಂತಿಯರಿಗೆ ಆಹಾರ ಪದಾರ್ಥಗಳನ್ನು ವಿತರಣೆ ಮಾಡಲಾಗುತ್ತಿತ್ತು. ಆದರೆ ಆಹಾರ ಧಾನ್ಯಗಳು ಸರಿಯಾಗಿ ಗರ್ಭಿಣಿಯರಿಗೆ ದೊರಕುತ್ತಿರಲಿಲ್ಲ. ಇದನ್ನು ತಪ್ಪಿಸಲು ಅಂಗನವಾಡಿ ಕೇಂದ್ರಗಳ ಮೂಲಕ ಗರ್ಭಿಣಿಯರಿಗೆ ನೇರವಾಗಿ ಪೌಷ್ಠಿಕಾಂಶವುಳ್ಳ ಆಹಾರವನ್ನು ನೀಡಲಾಗುತ್ತಿದೆ ಎಂದರು.

ಮಹಿಳೆಯರು ಮತ್ತು ಮಕ್ಕಳ ರಕ್ಷಣೆಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದ ಸರ್ಕಾರ ಹೆಚ್ಚಿನ ಆದ್ಯತೆ ನೀಡಿ ಕೆಲಸ ಮಾಡುತ್ತಿದೆ ಎಂದು ವಿಧಾನ ಪರಿಷತ್ ಸದಸ್ಯರಾದ ವಿ.ಎಸ್. ಉಗ್ರಪ್ಪ ತಿಳಿಸಿದರು.

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಇದೇ ಸಂದರ್ಭದಲ್ಲಿ ಇಲಾಖೆ ವತಿಯಿಂದ ಹೊರತರಲಾದ ಸಮಾಲೋಚನಾ ಫ್ಲಿಪ್‌ಚಾರ್ಟನ್ನು ಬಿಡುಗಡೆ ಮಾಡಿದರು.

ನಗರಾಭಿವೃದ್ದಿ ಹಾಗೂ ಹಜ್ ಸಚಿವರಾದ ಆರ್. ರೋಷನ್ ಬೇಗ್ ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು.

ಸರ್ಕಾರದ ಮುಖ್ಯ ಕಾರ್ಯದರ್ಶಿ ಸುಭಾಷ್‌ಚಂದ್ರ ಕುಂಠಿಆ, ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಹಾಗೂ ಅಭಿವೃದ್ದಿ ಆಯುಕ್ತರಾದ ವಿಜಯ ಭಾಸ್ಕರ್, ಮಹಿಳಾ ಮತ್ತು ಮಕ್ಕಳ ಅಭಿವೃದ್ದಿ ಇಲಾಖೆಯ ಸರ್ಕಾರದ ಕಾರ್ಯದರ್ಶಿ ಶ್ರೀಮತಿ ಉಮಾ ಮಹಾದೇವನ್,

ನಿರ್ದೇಶಕರಾದ ದೀಪಾ ಚೋಳನ್, ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮದ ಅಧ್ಯಕ್ಷರಾದ ಶ್ರೀಮತಿ ಭಾರತಿ ಶಂಕರ್, ರಾಜ್ಯ ಬಾಲಭವನ ಸೊಸೈಟಿ ಅಧ್ಯಕ್ಷರಾದ ಡಾ: ಅಂಜಲಿ ನಿಂಬಾಳ್ಕರ್, ನವದೆಹಲಿಯ ಯೂನಿಸೆಫ್ ಪ್ರತಿನಿಧಿ ರಾಬರ್ಟ್ ಸೇರಿದಂತೆ ಉನ್ನತ ಅಧಿಕಾರಿಗಳು ಹಾಗೂ ಫಲಾನುಭವಿಗಳು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

****